# Bangalore
# Regional News
# 26.03.2025 / 2.30 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

<u>ಮುಖ್ಯಾಂಶಗಳು</u>

1. ಸ್ಮಾರ್ಟ್ ಮೀಟರ್ ಹೆಸರಲ್ಲಿ ರಾಜ್ಯ ಸರ್ಕಾರದಿಂದ ಜನರ ಜೇಬಿಗೆ ಕತ್ತರಿ – ಬಿಜೆಪಿ ಆರೋಪ
2. ನಿವೇಶನ ರಹಿತ ಅರ್ಹ ಫಲಾನುಭವಿಗಳಿಗೆ ಶೀಘ್ರ ನಿವೇಶನ ಹಂಚಿಕೆ – ಸಚಿವ ಕೆ.ಎಚ್.ಮುನಿಯಪ್ಪ
3. ಯುಗಾದಿ, ರಂಜಾನ್ ಹಿನ್ನೆಲೆ ಕರ್ನಾಟಕ ಸಾರಿಗೆ ನಿಗಮದಿಂದ ವಿಶೇಷ ಬಸ್ ಸೇವೆ; 2 ಸಾವಿರ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ
4. ಮಂಗಳೂರಿನಲ್ಲಿ ದೇಶದ ಮೊದಲ ಕರಾವಳಿ ರಕ್ಷಣಾ ಅಕಾಡೆಮಿ ಸ್ಥಾಪನೆಗೆ ಮನವಿ

****************

ಸ್ಮಾರ್ಟ್ ಮೀಟರ್ ಹೆಸರಲ್ಲಿ ಕಾಂಗ್ರೆಸ್ ನೇತೃತ್ವದ ಸರ್ಕಾರ ರಾಜ್ಯದ ಜನರ ಜೇಬಿಗೆ ಕತ್ತರಿ ಹಾಕುತ್ತಿದೆ ಎಂದು ಬಿಜೆಪಿ ಆರೋಪಿಸಿದೆ.

ಸಾಮಾಜಿಕ ಜಾಲತಾಣದಲ್ಲಿ ಪೋಸ್ಟ್ ಮಾಡಿರುವ ಬಿಜೆಪಿ ಬೇರೆ ರಾಜ್ಯಗಳಲ್ಲಿ ಕೇವಲ 9 ಸಾವಿರಕ್ಕೆ ದೊರೆಯುವ ಸ್ಮಾರ್ಟ್ ಮೀಟರ್‌ಗಳಿಗೆ ರಾಜ್ಯದಲ್ಲಿ 8 ಸಾವಿರದ 510 ರೂಪಾಯಿ ಫಿಕ್ಸ್ ಮಾಡಲಾಗಿದೆ ಎಂದು ಆರೋಪಿಸಿದೆ.

ಬೆಸ್ಕಾಂ ಮತ್ತು ಇತರ ಎಸ್ಕಾಂಗಳ ಸ್ಮಾರ್ಟ್ ಮೀಟರ್ ಟೆಂಡರ್‌ನಲ್ಲಿ ಸುಮಾರು 15 ಸಾವಿರದ 568 ಕೋಟಿ ಬೃಹತ್ ಮೊತ್ತದ ಅವ್ಯವಹಾರ ನಡೆದಿದೆ. ಸೆಂಟ್ರಲ್ ಎಲೆಕ್ಟ್ರಿಸಿಟಿ ಅಥಾರಿಟಿ ನಿಯಮಾವಳಿ ಪ್ರಕಾರವೂ ಸ್ಮಾರ್ಟ್ ಮೀಟರ್ ಕಡ್ಡಾಯವಲ್ಲ. ಕೆಇಆರ್‌ಸಿ ನಿಯಮಾವಳಿಗಳಲ್ಲಿ ಸ್ಮಾರ್ಟ್ ಮೀಟರ್ ಕಡ್ಡಾಯ ಎಂದು ಎಲ್ಲೂ ಹೇಳಿಲ್ಲ. ಆದರೂ ಸರ್ಕಾರ ರಾಜ್ಯದ ಜನತೆಯ ಮೇಲೆ ಸ್ಮಾರ್ಟ್ ಮೀಟರ್ ಹೊರೆ ಹಾಕಿದ್ದು, ರಾಜ್ಯ ಸರ್ಕಾರ ಕೂಡಲೇ ಸ್ಮಾರ್ಟ್ ಮೀಟರ್ ಟೆಂಡರ್ ಪ್ರಕ್ರಿಯೆ ರದ್ದು ಮಾಡಬೇಕು ಎಂದು ಬಿಜೆಪಿ ಆಗ್ರಹಿಸಿದೆ.

****************

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿ ತಾಲೂಕಿನ ಕನ್ನಮಂಗಲ ಗ್ರಾಮ ಪಂಚಾಯತಿ ಆವರಣದಲ್ಲಿ 2024-25ನೇ ಸಾಲಿನ ಗ್ರಾಮಸಭೆ ಹಮ್ಮಿಕೊಳ್ಳಲಾಗಿತ್ತು.

ಸಭೆಯಲ್ಲಿ ಮಾತನಾಡಿದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ, ದೇವನಹಳ್ಳಿ ತಾಲೂಕಿನ ನಿವೇಶನರಹಿತ ಅರ್ಹ ಫಲಾನುಭವಿಗಳನ್ನು ಈಗಾಗಲೇ ಗುರುತಿಸಲಾಗಿದ್ದು, 2 ಸಾವಿರದ 500 ನಿವೇಶನ ಹಂಚಿಕೆ ಮಾಡುವ ಗುರಿ ಹೊಂದಲಾಗಿದೆ. ನಿವೇಶನ ರಹಿತ ಅರ್ಹ ಫಲಾನುಭವಿಗಳಿಗೆ ನಿವೇಶನ ಹಂಚಿಕೆ ಮಾಡಲಾಗುವುದು ಎಂದು ತಿಳಿಸಿದ್ದಾರೆ.

ಪ್ರತಿ ಗ್ರಾಮ ಪಂಚಾಯತಿಯಲ್ಲಿ ಹೊಸ ಮಾದರಿ ಶಾಲೆಗಳ ನಿರ್ಮಾಣದ ಗುರಿ ಹೊಂದಲಾಗಿದೆ. ಮಕ್ಕಳ ಪೋಷಣೆ, ಪಾಲನೆಯಲ್ಲಿ ತಾಯಂದಿರ ಪಾತ್ರ ಬಹಳ ಮುಖ್ಯ. ಗರ್ಭಿಣಿ ಮತ್ತು ಬಾಣಂತಿಯರಿಗೆ ಅಂಗನವಾಡಿ ಮುಖಾಂತರ ಪೌಷ್ಟಿಕ ಅಹಾರವನ್ನು ಕ್ರಮಬದ್ಧವಾಗಿ ವಿತರಿಸಬೇಕು ಎಂದು ಅಧಿಕಾರಿಗಳಿಗೆ ಸಚಿವ ಕೆ.ಹೆಚ್.ಮುನಿಯಪ್ಪ ಸೂಚಿಸಿದರು.

****************

ಯುಗಾದಿ ಹಬ್ಬಕ್ಕೆ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮವು 2 ಸಾವಿರ ಹೆಚ್ಚುವರಿ ಬಸ್ಸುಗಳ ವ್ಯವಸ್ಥೆ ಮಾಡಿದೆ. ಬೆಂಗಳೂರಿನಿಂದ ವಿವಿಧ ಸ್ಥಳಗಳಿಗೆ ಇದೇ 28 ರಿಂದ 30ರವರೆಗೆ ವಿಶೇಷ ಸಾರಿಗೆ ಲಭ್ಯವಿದ್ದು, ಮುಂಗಡ ಬುಕ್ಕಿಂಗ್‌ಗೆ ಅವಕಾಶವಿದೆ.

ಮಾ.30ರಂದು ಚಂದ್ರಮಾನ ಯುಗಾದಿ, ಮಾ.31ರಂದು ರಂಜಾನ್ ಹಬ್ಬವಿರುವುದರಿಂದ ನಿಗಮವು, ಸಾರ್ವಜನಿಕ ಪ್ರಯಾಣಿಕರ ಅನುಕೂಲಕ್ಕಾಗಿ ಹೆಚ್ಚುವರಿ ವಾಹನಗಳ ವಿಶೇಷ ಸಾರಿಗೆ ವ್ಯವಸ್ಥೆ ಮಾಡಿದೆ.

ಧಾರವಾಡ, ಬೆಳಗಾವಿ, ವಿಜಯಪುರ, ಗೋಕರ್ಣ, ಶಿರಸಿ, ಕಾರವಾರ, ರಾಯಚೂರು, ಕಲಬುರಗಿ, ಬಳ್ಳಾರಿ, ಕೊಪ್ಪಳ, ಯಾದಗಿರಿ, ಬೀದರ್, ತಿರುಪತಿ, ವಿಜಯವಾಡ, ಹೈದರಾಬಾದ್ ಮುಂತಾದ ಸ್ಥಳಗಳಿಗೆ ವಿಶೇಷ ಕಾರ್ಯಾಚರಣೆ ನಡೆಸಲಿವೆ.

ಮೈಸೂರು ರಸ್ತೆ ಬಸ್ ನಿಲ್ದಾಣದಿಂದ ಮೈಸೂರು, ಹುಣಸೂರು, ಪಿರಿಯಾಪಟ್ಟಣ, ವಿರಾಜಪೇಟೆ, ಕುಶಾಲನಗರ, ಮಡಿಕೇರಿಗೆ ಹಾಗೂ ತಮಿಳುನಾಡು ಮತ್ತು ಕೇರಳ ಕಡೆಗೆ ಮಧುರೈ, ಕುಂಭಕೋಣಂ, ಚೆನ್ನೈ, ಕೊಯಮತ್ತೂರ್, ತಿರುಚಿ, ಪಾಲಕ್ಕಾಡ್, ತ್ರಿಶೂರ್, ಎರ್ನಾಕುಲಂ, ಕೋಯಿಕೋಡ್, ಕ್ಯಾಲಿಕಟ್ ಮುಂತಾದ ಸ್ಥಳಗಳಿಗೆ ಹೋಗುವ ಬಸ್‌ಗಳನ್ನು ಶಾಂತಿನಗರದಲ್ಲಿನ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಬಸ್ ನಿಲ್ದಾಣದಿಂದ ಕಾರ್ಯಾಚರಣೆ ಮಾಡಲಾಗುವುದು ಎಂದು ಕೆಎಸ್‌ಆರ್‌ಟಿಸಿ ತಿಳಿಸಿದೆ.

****************

ಮಂಗಳೂರಿನಲ್ಲಿ ದೇಶದ ಮೊದಲ ಕರಾವಳಿ ರಕ್ಷಣಾ ಅಕಾಡೆಮಿ ಸ್ಥಾಪನೆಗೆ ಸಂಬಂಧಿಸಿದ ಒಪ್ಪಿಗೆ ಪ್ರಕ್ರಿಯೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸುವಂತೆ ದಕ್ಷಿಣ ಕನ್ನಡ ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ರಕ್ಷಣಾ ಸಚಿವಾಲಯದ ಕಾರ್ಯದರ್ಶಿ ರಾಜೇಶ್ ಕುಮಾರ್ ಸಿಂಗ್ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದ್ದಾರೆ.

ಕರಾವಳಿ ತೀರದ ಕಣ್ಗಾವಲು, ಭದ್ರತಾ ನೌಕಾ ಪಡೆಗೆ ಪ್ರತ್ಯೇಕ ವಿಶ್ವದರ್ಜೆಯ ತರಬೇತಿಗಾಗಿ 2017ರಲ್ಲಿ ಮಂಗಳೂರಿನಲ್ಲಿ ಕರಾವಳಿ ರಕ್ಷಣಾ ಅಕಾಡೆಮಿ ಸ್ಥಾಪನೆಗೆ ಮಂಜೂರಾತಿ ದೊರೆತಿತ್ತು. ಈ ಅಕಾಡೆಮಿಗಾಗಿ ಕೆಂಜಾರಿನಲ್ಲಿ ಕೆಐಎಡಿಬಿಯಿಂದ ಈಗಾಗಲೇ 159.03 ಎಕರೆ ಜಮೀನು ಮಂಜೂರಾಗಿದ್ದು, ಭೂ ಹಸ್ತಾಂತರ ಪ್ರಕ್ರಿಯೆ ಕೂಡ ನಡೆದಿದೆ.

ಅಕಾಡೆಮಿ ಸ್ಥಾಪಿಸುವುದಕ್ಕೆ ವಿಸ್ತೃತ ಯೋಜನಾ ವರದಿ ಕೂಡ ರಕ್ಷಣಾ ಸಚಿವಾಲಯಕ್ಕೆ ಸಲ್ಲಿಕೆಯಾಗಿದೆ. ಕರ್ನಾಟಕ ಮಾತ್ರವಲ್ಲ ಇಡೀ ದೇಶದ ಪಾಲಿಗೆ ಅತ್ಯಂತ ಮಹತ್ವಾಕಾಂಕ್ಷಿ ಯೋಜನೆಯಾದ ಕರಾವಳಿ ರಕ್ಷಣಾ ಅಕಾಡೆಮಿ ಸ್ಥಾಪಿಸುವುದಕ್ಕೆ ಬಾಕಿಯಿರುವ ಆಡಳಿತಾತ್ಮಕ ಒಪ್ಪಿಗೆಯನ್ನು ತ್ವರಿತಗೊಳಿಸಲು ಸಂಸದ ಕ್ಯಾಪ್ಟನ್ ಬ್ರಿಜೇಶ್ ಚೌಟ, ರಕ್ಷಣಾ ಕಾರ್ಯದರ್ಶಿಗಳನ್ನು ಕೋರಿದ್ದಾರೆ.

****************

ತಾಂತ್ರಿಕ ದೋಷದಿಂದ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಅಣೆಕಟ್ಟೆಯ ಗೇಟ್ ನಂ–5 ರಿಂದ ಸುಮಾರು ಐದು ಸಾವಿರ ಕ್ಯೂಸೆಕ್ ಕಾವೇರಿ ನೀರು ನದಿಗೆ ಹರಿದು, ಈ ಮೂಲಕ ತಮಿಳುನಾಡಿಗೆ ಸೇರಿದೆ. ಇದೀಗ ತಾಂತ್ರಿಕ ದೇಶವನ್ನು ಸರಿಪಡಿಸಿ, ಗೇಟ್ ಬಂದ್ ಮಾಡಿರುವುದಾಗಿ ನೀರಾವರಿ ಇಲಾಖೆಯ ಅಧಿಕಾರಿಗಳು ತಿಳಿಸಿದ್ದಾರೆ.

ತಾಂತ್ರಿಕ ದೋಷ ಆಗದಂತೆ ಕ್ರಮ ವಹಿಸುವುದಾಗಿ ಅಧಿಕಾರಿಗಳು ಭರವಸೆ ನೀಡಿದ್ದಾರೆ.

ಕಳೆದ ವರ್ಷ ಜೂನ್‌ನಲ್ಲಿ ಕಾವೇರಿ ಜಲಾನಯನ ಪ್ರದೇಶದಲ್ಲಿ ವ್ಯಾಪಕ ಮಳೆಯಾದ ಪರಿಣಾಮ, ಕೆಆರ್‌ಎಸ್ ಅಣೆಕಟ್ಟೆ ಸಂಪೂರ್ಣ ಭರ್ತಿಯಾಗಿತ್ತು. ಜಲಾಶಯದಲ್ಲಿ ಇದೀಗ 106.48 ಅಡಿ ನೀರು ಸಂಗ್ರಹವಾಗಿದೆ.

****************

ರಾಜ್ಯದ ಹಿಂದುಳಿದ ಪ್ರದೇಶಗಳಿಗೆ ಭೇಟಿ ನೀಡಿ, ಅಲ್ಲಿರುವ ಸಮಸ್ಯೆಗಳನ್ನು ಗುರುತಿಸಿ, ರಾಜ್ಯ ಸರ್ಕಾರಕ್ಕೆ ವರದಿ ನೀಡುವುದಾಗಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷ ಪ್ರೊ.ಎಂ.ಗೋವಿಂದರಾವ್ ತಿಳಿಸಿದ್ದಾರೆ.

ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲೂಕಿನ ತಮ್ಮಡಹಳ್ಳಿ ಗ್ರಾಮಕ್ಕೆ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿ ಅಧ್ಯಕ್ಷರ ತಂಡ ಭೇಟಿ ನೀಡಿ ಪರಿಶೀಲನೆ ನಡೆಸಿದ ಬಳಿಕ ಸುದ್ದಿಗಾರರೊಂದಿಗೆ ಅವರು ಮಾತನಾಡಿದರು.

ರಾಜ್ಯ ಸರ್ಕಾರ ಈಗಷ್ಟೇ ಅಸಮತೋಲನ ನಿವಾರಣಾ ಸಮಿತಿ ರಚಿಸಿದ್ದು, ಎಲ್ಲೆಲ್ಲಿ ಅಸಮತೋಲನವಿದೆ ಎಂದು ಪತ್ತೆ ಹಚ್ಚಿ, ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದರು.

****************

ಬೇಸಿಗೆಯಲ್ಲಿ ಯಾವುದೇ ಗ್ರಾಮದಲ್ಲಿ ಕುಡಿಯುವ ನೀರಿನ ಸಮಸ್ಯೆ ತಲೆದೋರದಂತೆ ಮತ್ತು ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಎಲ್ಲಾ ಅಗತ್ಯ ಮುನ್ನೆಚ್ಚರಿಕೆಗಳನ್ನು ಕೈಗೊಳ್ಳುವಂತೆ ಅಧಿಕಾರಿಗಳಿಗೆ ಉತ್ತರ ಕನ್ನಡ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ ಸೂಚಿಸಿದ್ದಾರೆ.

ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆಯಾಗದಂತೆ ಮುಂಜಾಗ್ರತೆ ವಹಿಸುವ ಕುರಿತು ಕಾರವಾರದ ಜಿಲ್ಲಾಧಿಕಾರಿ ಕಚೇರಿಯಲ್ಲಿ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಉತ್ತರ ಕನ್ನಡ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಅನೇಕ ಯೋಜನೆಗಳನ್ನು ಕೈಗೊಂಡಿದ್ದು, ಈಗಾಗಲೇ 1 ಸಾವಿರ ಕೋಟಿ ರೂಪಾಯಿ ಅಧಿಕ ವೆಚ್ಚದಲ್ಲಿ ಜಿಲ್ಲೆಯಾದ್ಯಂತ ಕುಡಿಯುವ ನೀರಿನ ಕಾಮಗಾರಿಗಳು ನಡೆಯುತ್ತಿವೆ. ಕೆಲವು ಗ್ರಾಮಗಳಿಗೆ ಕುಡಿಯುವ ನೀರಿನ ಸೌಲಭ್ಯ ಪೂರೈಸಲಾಗಿದೆ ಎಂದರು.

****************

ದೌರ್ಜನ್ಯ ಪ್ರಕರಣಗಳನ್ನು ಗಂಭೀರವಾಗಿ ಪರಿಗಣಿಸಬೇಕು. ಸಂತ್ರಸ್ತರ ಮನೆಗಳಿಗೆ ಭೇಟಿ ಮಾಡಿ, ಮಾಹಿತಿ ಕ್ರೋಢೀಕರಿಸಿ, ಕಾಲಮಿತಿಯೊಳಗೆ ಪ್ರಕರಣಗಳನ್ನು ಇತ್ಯರ್ಥಪಡಿಸಲು ಕ್ರಮ ವಹಿಸುವಂತೆ ಅಧಿಕಾರಿಗಳಿಗೆ ವಿಜಯಪುರ ಜಿಲ್ಲಾಧಿಕಾರಿ ಟಿ.ಭೂಬಾಲನ್ ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

ಎಸ್‌ಸಿ–ಎಸ್‌ಟಿ ಕಾಯ್ದೆ ಹಾಗೂ ಪೋಕ್ಸೊ ಕಾಯ್ದೆಯಡಿ ಜಿಲ್ಲೆಯಲ್ಲಿ 2024 ರಿಂದ 2025ರ ಫೆಬ್ರವರಿ ವರೆಗೆ ದಾಖಲಾದ 265 ಪ್ರಕರಣಗಳ ಪೈಕಿ, 1 ಪ್ರಕರಣದಲ್ಲಿ ಶಿಕ್ಷೆಯಾಗಿದ್ದು, 34 ಪ್ರಕರಣಗಳಲ್ಲಿ ಆರೋಪಿ ಬಿಡುಗಡೆಗೊಳಿಸಿದ್ದು, 37 ಪ್ರಕರಣಗಳನ್ನು ವಿಲೇವಾರಿ ಮಾಡಲಾಗಿದೆ. ಒಟ್ಟು 229 ಪ್ರಕರಣಗಳು ಬಾಕಿ ಉಳಿದಿವೆ ಎಂದು ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.

ಅಧಿಕಾರಿಗಳು ದೌರ್ಜನ್ಯ ಪ್ರಕರಣಗಳನ್ನು ತ್ವರಿತ ಇತ್ಯರ್ಥಕ್ಕೆ ಆದ್ಯತೆ ನೀಡಬೇಕು. ನಿಯಮಾನುಸಾರ ಹಾಗೂ ಪ್ರಕರಣಾನುಸಾರ ಕಾಲಮಿತಿಯೊಳಗೆ ಪರಿಹಾರ ಧನ ಒದಗಿಸಬೇಕು. ಯಾವುದೇ ಬಾಕಿ ಉಳಿಸಿಕೊಳ್ಳದಂತೆ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಸೂಚನೆ ನೀಡಿದರು.

****************

ಗದಗ ಜಿಲ್ಲೆಯಲ್ಲಿ ಕುಡಿಯುವ ನೀರಿನ ಕೊರತೆಯಾಗದಂತೆ ಕ್ರಮವಹಿಸಿ, ಬರ ಪರಿಸ್ಥಿತಿ ಎದುರಾದಲ್ಲಿ ಅಧಿಕಾರಿಗಳು ಸಮನ್ವಯದೊಂದಿಗೆ ಸಮರ್ಪಕವಾಗಿ ನಿಭಾಯಿಸಬೇಕು ಎಂದು ಗದಗ ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜರುಗಿದ ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಶಿಂಗಟಾಲೂರ ಬ್ಯಾರೇಜ್ ಹತ್ತಿರ ರೈತರು ಪಂಪ್‌ಸೆಟ್ ಮೂಲಕ ನೀರೆತ್ತುವುದನ್ನು ನಿರ್ಬಂಧಿಸಬೇಕು. ಕುಡಿಯುವ ನೀರು ಸರಬರಾಜಿಗಾಗಿ ಕಾರ್ಯನಿರ್ವಹಿಸುತ್ತಿರುವ ಪಂಪ್‌ಸೆಟ್‌ಗಳ ಸ್ಥಿತಿಗತಿಗಳನ್ನು ಅವಲೋಕಿಸಿ, ವರದಿ ಸಲ್ಲಿಸಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ತಾಲೂಕಾವಾರು ನೀರಿನ ಸಮಸ್ಯೆ ಇರುವ ಗ್ರಾಮಗಳ ಪಟ್ಟಿ ತಯಾರಿಸಿ ಸಲ್ಲಿಸಬೇಕು ಎಂದು ಜಿಲ್ಲಾಧಿಕಾರಿ ನಿರ್ದೇಶನ ನೀಡಿದರು.

****************

ಯುವ ನಿಧಿ ಯೋಜನೆಯಡಿಯಲ್ಲಿ ಧಾರವಾಡ ತಾಲೂಕಿನಲ್ಲಿ ಒಟ್ಟು 2 ಸಾವಿರದ 382 ನೋಂದಣಿಯಾಗಿದ್ದಾರೆ. ಬಡವರು, ಮತ್ತು ಮಧ್ಯಮವರ್ಗದ ಜನರಿಗಾಗಿ ಗ್ಯಾರಂಟಿ ಯೋಜಗಳನ್ನು ರಾಜ್ಯ ಸರ್ಕಾರ ಜಾರಿಗೆ ತಂದಿದೆ. ಅರ್ಹ ಫಲಾನುಭವಿಗಳಿಗೆ ಯೋಜನೆಗಳು ತಲುಪುವಂತೆ, ಗ್ಯಾರಂಟಿ ಸಮಿತಿಯ ಸದಸ್ಯರು ಕ್ರಮ ವಹಿಸಬೇಕು ಎಂದು ಶಾಸಕ ವಿನಯ ಕುಲಕರ್ಣಿ ಹೇಳಿದ್ದಾರೆ.

ಸಮಿತಿಯ ಅಧ್ಯಕ್ಷ ಅರವಿಂದ ಏಗನಗೌಡರ ಮಾತನಾಡಿ, ಗ್ಯಾರಂಟಿ ಯೋಜನೆಗಳು ಹೆಚ್ಚಿನ ಜನರಿಗೆ ತಲುಪುವ ನಿಟ್ಟಿನಲ್ಲಿ ಅಧಿಕಾರಿಗಳು ಇನ್ನೂ ಹೆಚ್ಚಿನ ಶ್ರಮವಹಿಸಬೇಕು ಎಂದರು.

********ಮುಕ್ತಾಯ********